10

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಡಾ|| ವೈ.ಎ. ನಾರಾಯಣಸ್ವಾಮಿ ಇವರ ನಿಯಮ-330ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ:**

**ವಿಷಯ:**

ಅನುದಾನ ಮತ್ತು ಅನುದಾನ ರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಉಪನ್ಯಾಸಕರು ಗಂಭೀರವಾದ ಕಾಯಿಲೆಗಳಿಗೆ ತುತ್ತಾಗಿ ಯಾವುದೇ ವೈದ್ಯಕೀಯ ವೆಚ್ಚ ಮರುಪಾವತಿ ಪಡೆಯದೇ ಇರುವುದರಿಂದ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಗಂಭೀರವಾದ ವಿಚಾರದ ಕುರಿತು ಪ್ರಸ್ತಾಪಿಸಲಾಗಿದೆ.

**ಉತ್ತರ:**

ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ, ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡಿಸುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ.

ಸಂಖ್ಯೆ: ಇಪಿ 51 ಎಸ್‌ಇಎಸ್ 2021

**(ಎಸ್. ಸುರೇಶ್ ಕುಮಾರ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು